# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಅ.ವಿ:ಸುತ್ತೋಲೆ:2023-24 | 2178 ದಿನಾಂಕ:12.09.2023

## : ಸುತ್ತೋಲೆ :

ವಿಷಯ: ದಿನಾಂಕ:15.09.2023 ರಂದು "ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ" ಅಂಗವಾಗಿ ಭಾರತದ ಸಂವಿಧಾನದ ಪೀಠಿಕೆಯನ್ನು ಓದುವ ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:11.09.2023

* * * * *

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವದ ದಿನದ ಆಚರಣೆಯ ಭಾಗವಾಗಿ **ದಿನಾಂಕ:15.09.2023 ರಂದು ಭಾರತದ ಸಂವಿಧಾನದ ಪೀಠಿಕೆಯನ್ನು** ಓದುವಂತೆ ಹಾಗೂ ಈ ಬಗ್ಗೆ ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯಿಂದ ಆಯೋಜಿಸಿರುವ ಆನ್‌ಲೈನ್ ಕಾರ್ಯಕ್ರಮದಲ್ಲಿ ಭಾಗವಹಿಸಲು ನೋಂದಾಯಿಸುವಂತೆ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಆಡಳಿತ ವಿಭಾಗಗಳು, ಸ್ನಾತಕೋತ್ತರ ವಿಭಾಗಗಳು ಹಾಗೂ ಘಟಕ/ಸಂಯೋಜಿತ ಕಾಲೇಜುಗಳ ಎಲ್ಲಾ ಬೋಧಕ & ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪಿಹೆಚ್.ಡಿ. ಸಂಶೋಧನಾರ್ಥಿಗಳು **ದಿನಾಂಕ:15.09.2023 ರಂದು ಬೆಳಿಗ್ಗೆ 9.30 ಗಂಟೆಗೆ ತುಮಕೂರಿನ ಶ್ರೀ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಹಾಜರಿದ್ದು, ಭಾರತದ ಸಂವಿಧಾನದ ಪೀಠಿಕೆಯನ್ನು ಓದುವ ಕಾರ್ಯಕ್ರಮದಲ್ಲಿ** ತಪ್ಪದೇ ಭಾಗವಹಿಸಲು ತಿಳಿಸಿದೆ.

ಸೂಚಿತ ಮಾಹಿತಿಯನ್ನು ಸಂಬಂಧ ಪಟ್ಟ ವಿಭಾಗಗಳ ಮುಖ್ಯಸ್ಥರು ತಮ್ಮ ಅಧೀನದಲ್ಲಿನ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು/ಪಿಹೆಚ್.ಡಿ. ಸಂಶೋಧನಾರ್ಥಿಗಳ ಗಮನಕ್ಕೆ ತರುವುದು.

ಆದೇಶದ ಮೇರೆಗೆ

Mangalakshmi M.

**ಉಪಕುಲಸಚಿವರು**
**ಅಭಿವೃದ್ಧಿ ವಿಭಾಗ**
**ತುಮಕೂರು ವಿಶ್ವವಿದ್ಯಾನಿಲಯ**
**ತುಮಕೂರು**

ಅಡಕ: ಭಾರತದ ಸಂವಿಧಾನದ ಪೀಠಿಕೆ

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು:

1. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಸಂಬಂಧಪಟ್ಟ ಮುಖ್ಯಸ್ಥರಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)**
3. ಕಚೇರಿ ಪ್ರತಿ

"ನಾವು, ನಮ್ಮ ಕಛೇರಿ / ಸಂಸ್ಥೆಯಲ್ಲಿ ಪ್ರತಿಯೊಬ್ಬರು, ಈ ಮೂಲಕ ನಮ್ಮ ಕೆಲಸ ಮತ್ತು ಜೀವನದಲ್ಲಿ ಸಂವಿಧಾನದ ಪೀಠಿಕೆಯನ್ನು ಅತ್ಯಂತ ಪ್ರಾಮಾಣಿಕವಾಗಿ ಪಾಲಿಸುವಲ್ಲಿ ಬದ್ಧರಾಗಿರಲು ಪ್ರತಿಜ್ಞೆ ಮಾಡುತ್ತೇವೆ"

## ಭಾರತದ ಸಂವಿಧಾನ

### ಪ್ರಸ್ತಾವನೆ

ಭಾರತದ ಜನಗಳಾದ ನಾವು
ಭಾರತವನ್ನು ಒಂದು ಸಾರ್ವಭೌಮ ಸಮಾಜವಾದಿ
ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ
ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ:
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ;
ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು
ಉಪಾಸನಾ ಸ್ವಾತಂತ್ರ್ಯ;
ಸ್ಥಾನಮಾನ ಹಾಗೂ ಅವಕಾಶ ಸಮಾನತೆ
ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು
ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಅವರಲ್ಲಿ
ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು
ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ
ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ,
ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.

# ಕರ್ನಾಟಕ ಸರ್ಕಾರ

## ಸಮಾಜ ಕಲ್ಯಾಣ ಇಲಾಖೆ

"We, each one of us, in this office / Institution, hereby pledge that we will abide by the preamble in our work and life with utmost sincerity"

## THE CONSTITUTION OF INDIA

### PREAMBLE

WE, THE PEOPLE OF INDIA,
having solemnly resolved to constitute India into a
SOVEREIGN SOCIALIST
SECULAR DEMOCRATIC REPUBLIC
and to secure to all its citizens;
JUSTICE, social, economic and political;
LIBERTY of thought, expression,
belief, faith and worship;
EQUALITY of status and of opportunity;
and to promote among them all
FRATERNITY assuring the dignity of the
individual and the unity and
integrity of the Nation;
IN OUR CONSTITUENT ASSEMBLY
this twenty-sixth day of November, 1949, do
HEREBY ADOPT, ENACT AND GIVE TO
OURSELVES THIS CONSTITUTION.

# GOVERNMENT OF KARNATAKA

## Social Welfare Department